ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೊಂದನೆಯ ಅಧಿವೇಶನ
ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಕೊಡಗು ಜಿಲ್ಲೆಯಲ್ಲಿ ನಿರ್ಮಿಸಲಾಗಿರುವ ಕನ್ನಡ ಭವನಗಳ ಬಗ್ಗೆ

ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

69 (735) ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಡಗು ಜಿಲ್ಲೆಯಲ್ಲಿ ಇಲ್ಲಿಯವರೆಗೆ ನಿರ್ಮಿಸಲಾಗಿರುವ ಕನ್ನಡ ಭವನಗಳ ಸಂಖ್ಯೆ ಎಷ್ಟು; (ಸ್ಥಳಗಳ ಹೆಸರಿನೊಂದಿಗೆ, ಅವುಗಳಿಗೆ ಕಳೆದ ಮೂರು ವರ್ಷಗಳಲ್ಲಿ ಬಿಡುಗಡೆಯಾಗಿರುವ ಅನುದಾನ ಮತ್ತು ಖರ್ಚು ಮಾಡಲಾದ ಹಣದ ವಿವರ ನೀಡುವುದು)

(ಆ) ಕೊಡಗು ಜಿಲ್ಲೆಯಲ್ಲಿ ಹೊಸ ಕನ್ನಡ ಭವನಗಳನ್ನು ನಿರ್ಮಿಸಲು ಯಾವುದಾದರೂ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ಅವುಗಳ ಪೂರ್ಣ ವಿವರ ಮತ್ತು ಅದಕ್ಕಾಗಿ ಖರ್ಚು ಮಾಡುತ್ತಿರುವ ಹಣದ ವಿವರಗಳನ್ನು ನೀಡುವುದು)

(ಇ) ಕೊಡಗು ಜಿಲ್ಲೆಯಲ್ಲಿ ಕನ್ನಡ ಸಂಸ್ಕೃತಿ ಇಲಾಖೆಗೆ ಒಳಪಟ್ಟಿರುವ ಒಟ್ಟು ಎಷ್ಟು ಕಟ್ಟಡಗಳು/ಆಸ್ತಿಗಳು ಇವೆ; ಇವುಗಳಿಗೆ ಕಳೆದ ಮೂರು ವರ್ಷಗಳಲ್ಲಿ ನೀಡಲಾದ ಅನುದಾನ ಮತ್ತು ಖರ್ಚು ಮಾಡಲಾದ ಅನುದಾನ ಎಷ್ಟು? (ಮಾಹಿತಿ ನೀಡುವುದು)